Online Newspaper Clipping Service

**ಉದಯವಾಣಿ**

**Dtd-Tuesday, 03rd, July- 2018**

Page No. 3

### ದೇವರಾಜ ಅರಸು ವೈದ್ಯಕೀಯ ಕಾಲೇಜಿನ ವೈದ್ಯರ ದಿನಾಚರಣೆಯಲ್ಲಿ ಸ್ತ್ರೀ ರೋಗ ತಜ್ಞೆ ಡಾ.ಸುಜಾತಾ ಸಲಹೆ

# ವೃತ್ತಿಗೆ ದ್ರೋಹ ಬಗೆಯದೇ ರೋಗಿಯನ್ನು ಪ್ರೀತಿಸಿ

**ಕೋಲಾರ:** ವೈದ್ಯರನ್ನು ದೇವರೆಂದು ಕಾಣುತ್ತಾರೆ, ಅಂತಹ ವೃತ್ತಿ ಘನತೆಗೆ ಧಕ್ಕೆ ಬರುವಂತೆ ವರ್ತಿಸದಿರಿ, ರೋಗಿಗಳನ್ನು ಪ್ರೀತಿ, ವಿಶ್ವಾಸದಿಂದ ಕಂಡು ಗುಣಮಟ್ಟದ ಚಿಕಿತ್ಸೆ ನೀಡಿದರೆ ಸಮಾಜದಲ್ಲಿ ಗೌರವಕ್ಕೆ ಪಾತ್ರರಾಗುತ್ತೀರಿ ಎಂದು ಸ್ತ್ರೀ ರೋಗತಜ್ಞೆ ಡಾ.ಸುಜಾತಾ ಸಲಹೆ ನೀಡಿದರು.

ಸೋಮವಾರ ನಗರದ ಹೊರವಲಯದ ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಹಳೆ ವಿದ್ಯಾರ್ಥಿಗಳ ಸಂಘ ನೀಡಿದ ಸನ್ಮಾನ ಸ್ವೀಕರಿಸಿ ಅವರು ಮಾತನಾಡುತ್ತಿದ್ದರು.

**ಮೌಲ್ಯ:** ಯುವ ವೈದ್ಯರಿಗೆ ಹಿರಿಯ ವೈದ್ಯರ ಮಾರ್ಗದರ್ಶನ ಅಗತ್ಯ ಎಂದ ಅವರು, ಹಿರಿಯರ ಹಾದಿಯಲ್ಲಿ ವೃತ್ತಿ ಆರಂಭಿಸಿದರೆ ಸಾಧನೆ ಮಾಡಲು ಸಹಕಾರಿಯಾಗುತ್ತದೆ ಎಂದು ಹೇಳಿದರು.

ಸಮಾಜದಲ್ಲಿ ಹಣಕ್ಕೆ ಮಾತ್ರ ಸೀಮಿತವಾಗಿ ಕೆಲ ವೈದ್ಯರು ತಮ್ಮ ವೃತ್ತಿ ಮೌಲ್ಯಗಳನ್ನು ಕಳೆದುಕೊಳ್ಳುತ್ತಿರುವುದರಿಂದ ವೈದ್ಯಕೀಯ ಕ್ಷೇತ್ರದ ಮೌಲ್ಯಗಳು ಕುಸಿಯುತ್ತಿವೆ. ಇಡೀ ಸಮಾಜ ವೈದ್ಯ ದೇವೋಭವ ಎಂದು ಗುರುತಿಸುವಾಗ ಆ ಗೌರವಕ್ಕೆ ನಾವು ಅರ್ಹರೆ ಎಂಬುದನ್ನು ವೈದ್ಯರು ತಮ್ಮ ಆತ್ಮಸಾಕ್ಷಿಗೆ ಪ್ರಶ್ನಿಸಿಕೊಳ್ಳಬೇಕು. ಈ ಗೌರವಕ್ಕೆ ಪಾತ್ರರಾದವರು ಎಷ್ಟು ಮಂದಿ ಇದ್ದಾರೆ ವಿದ್ಯಾಭ್ಯಾಸ ಮಾಡಿ ವಿದೇಶಕ್ಕೆ ತೆರಳುತ್ತಿರುವವರ ಬಗ್ಗೆ ವಿಷಾದ ವ್ಯಕ್ತಪಡಿಸಿದರು.



ಕೋಲಾರದ ದೇವರಾಜ ಅರಸು ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ವೈದ್ಯರ ದಿನಾಚರಣೆ ಕಾರ್ಯಕ್ರಮದಲ್ಲಿ ಹಳೆ ವಿದ್ಯಾರ್ಥಿಗಳ ಸಂಘದಿಂದ ಸ್ತ್ರೀ ರೋಗತಜ್ಞೆ ಡಾ.ಸುಜಾತಾ ಅವರನ್ನು ಸನ್ಮಾನಿಸಲಾಯಿತು.

ದೇವರಾಜ ಅರಸು ವೈದ್ಯಕೀಯ ಕಾಲೇಜನ್ನು ಬಡವರಿಗೆ ಗುಣಮಟ್ಟದ ಆರೋಗ್ಯ ಕಲ್ಪಿಸಲು ಆರಂಭಿಸಲಾಗಿದೆ. ಇಲ್ಲಿಂದ ಅನೇಕ ಮಂದಿ ವೈದ್ಯರಾಗಿ ಹೊರ ಹೊಮ್ಮಿದ್ದಾರೆ. ಅವರ ಸೇವೆ ಸಮಾಜಕ್ಕೆ ಉಪಯೋಗವಾಗುವಂತಾಗಬೇಕು. ವೈದ್ಯರಿಗೆ ವೃತ್ತಿ ಜೀವನದಲ್ಲಿ ಅನೇಕ ಸವಾಲುಗಳು ಎದುರಾಗುತ್ತವೆ. ಅವುಗಳನ್ನು ಧೈರ್ಯದಿಂದ ಎದುರಿಸಿ ಉತ್ತಮ ಚಿಕಿತ್ಸೆ ನೀಡಿದರೆ ಗೌರವ ಸಾಧ್ಯ ಎಂದರು.

ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸಲು ವೈದ್ಯರು ಹಿಂಜರಿಯುತ್ತಿರುವುದರಿಂದ ಎಷ್ಟೋ ಬಡಜನರು ಆರೋಗ್ಯ ಸೇವೆಯಿಂದ ವಂಚಿತರಾಗುತ್ತಿದ್ದಾರೆ. ವೈದ್ಯರು ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸಲು ಮುಂದಾಗಬೇಕು ಎಂದು ಕೋರಿದರು.

**ಚಿಕಿತ್ಸೆ:** ವೈದ್ಯಕೀಯ ವಿವಿ ಕುಲಪತಿ ಡಾ.ಕುಮಾರ್, ತರಬೇತಿ ಕೊರತೆಯಿಂದ ಗುಣಮಟ್ಟದ ಚಿಕಿತ್ಸೆ ನೀಡಲಾಗದೆ ಸಾಕಷ್ಟು ಮಂದಿ ವೃತ್ತಿಯಿಂದ ದೂರ ಸರಿಯುತ್ತಿದ್ದಾರೆ. ಇಲ್ಲಿಗೆ ವಿದ್ಯೆ ಪಡೆದು ವಿದೇಶಗಳಿಗೆ ಸೇವೆ ಸಲ್ಲಿಸುವುದು ನಿಯಂತ್ರಣವಾದಾಗ ಹೆಸರುಗಳಿಸಲು ಸಾಧ್ಯ ಎಂದರು.

ಉಪಕುಲಪತಿ ಡಾ.ರಘುವೀರ್ ಮಾತನಾಡಿದರು. ಇದೇ ವೇಳೆ ಗರ್ಭಿಣಿ ಮತ್ತು ಸ್ತ್ರೀ ರೋಗ ತಜ್ಞೆ ಡಾ.ಸುಜಾತಾ ಅವರನ್ನು ಸಂಸ್ಥೆಯ ಹಳೇ ವಿದ್ಯಾರ್ಥಿ ಸಂಘದಿಂದ ಸನ್ಮಾನಿಸಲಾಯಿತು.

ಆಸ್ಪತ್ರೆಯ ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಪ್ರಾಂಶುಪಾಲ ಡಾ.ಎಂ.ಎಲ್.ಹರೇಂದ್ರ ಕುಮಾರ್, ಹಳೇ ವಿದ್ಯಾರ್ಥಿ ಸಂಘದ ಉಪಾಧ್ಯಕ್ಷ ಡಾ.ಎ.ರವೀಶ್, ಜಂಟಿ ಕಾರ್ಯದರ್ಶಿ ಡಾ.ಕೆ.ದಿನೇಶ್, ಖಜಾಂಚಿ ಡಾ.ಸಿ.ಮುನಿನಾರಾಯಣ ಇತರರು ಹಾಜರಿದ್ದರು.

ಪ್ರಜಾವಾಣಿ





ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯವು ಕೋಲಾರದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವೈದ್ಯರ ದಿನಾಚರಣೆಯಲ್ಲಿ ಸ್ತ್ರೀರೋಗ ತಜ್ಞೆ ಡಾ.ಸುಜಾತಾ ಅವರನ್ನು ಸನ್ಮಾನಿಸಲಾಯಿತು (ಎಡಚಿತ್ರ). ವೈದ್ಯರು ಹಾಗೂ ವಿದ್ಯಾರ್ಥಿಗಳು ಪಾಲ್ಗೊಂಡಿದ್ದರು

# ಸೇವಾ ಮನೋಭಾವ ಮುಖ್ಯ

## ವೈದ್ಯರ ದಿನಾಚರಣೆಯಲ್ಲಿ ಸ್ತ್ರೀರೋಗ ತಜ್ಞೆ ಸುಜಾತಾ ಕಿವಿಮಾತು

ಪ್ರಜಾವಾಣಿ ವಾರ್ತೆ

**ಕೋಲಾರ:** 'ವೈದ್ಯಕೀಯ ವೃತ್ತಿಯಲ್ಲಿ ಹಣ ಸಂಪಾದನೆಗಿಂತ ಸೇವಾ ಮನೋಭಾವ ಮುಖ್ಯ. ರೋಗಿಗಳಿಗೆ ಗುಣಮಟ್ಟದ ವೈದ್ಯಕೀಯ ಸೇವೆ ನೀಡಿದರೆ ಸಮಾಜದಲ್ಲಿ ಗೌರವ ಸಿಗುತ್ತದೆ' ಎಂದು ಸ್ತ್ರೀರೋಗ ತಜ್ಞೆ ಡಾ.ಸುಜಾತಾ ಕಿವಿಮಾತು ಹೇಳಿದರು.

ದೇವರಾಜ ಅರಸು ವೈದ್ಯಕೀಯ ಮಹಾವಿದ್ಯಾಲಯವು ನಗರದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವೈದ್ಯರ ದಿನಾಚರಣೆಯಲ್ಲಿ ಮಾತನಾಡಿ, 'ಇತ್ತೀಚಿನ ವರ್ಷಗಳಲ್ಲಿ ವೈದ್ಯಕೀಯ ಕ್ಷೇತ್ರದಲ್ಲಿ ಸೇವಾ ಮನೋಭಾವ ಕಾಣೆಯಾಗಿ ಹಣ ಗಳಿಕೆಯೇ ಮುಖ್ಯವಾಗಿದೆ' ಎಂದು ಕಳವಳ ವ್ಯಕ್ತಪಡಿಸಿದರು.

'ಕೆಲ ವೈದ್ಯರು ಮಾನವೀಯತೆ ಕಳೆದುಕೊಳ್ಳುತ್ತಿರುವುದರಿಂದ ವೈದ್ಯಕೀಯ ಕ್ಷೇತ್ರದ ಮೌಲ್ಯಗಳು ಕುಸಿಯುತ್ತಿವೆ. ಯುವ ವೈದ್ಯರು ಹಿರಿಯ ವೈದ್ಯರ ಮಾರ್ಗದರ್ಶನದಲ್ಲಿ ವೃತ್ತಿ ಬದುಕು ಆರಂಭಿಸಿದರೆ ಉನ್ನತ ಸಾಧನೆ ಮಾಡಬಹುದು. ವೈದ್ಯರು ಸರಿ ತಪ್ಪುಗಳ ಆತ್ಮವಿಮರ್ಶೆ ಮೂಲಕ ಸೇವೆಗೆ ಆದ್ಯತೆ ನೀಡಬೇಕು' ಎಂದು ಸಲಹೆ ನೀಡಿದರು.

> ವೈದ್ಯರಿಗೆ ವೃತ್ತಿ ಜೀವನದಲ್ಲಿ ಸವಾಲುಗಳು ಸಾಮಾನ್ಯ. ಅವುಗಳನ್ನು ಎದುರಿಸುವ ಧೈರ್ಯ ಇರಬೇಕು. ರೋಗಿಗಳಿಗೆ ವಿಶ್ವಾಸದಿಂದ ಚಿಕಿತ್ಸೆ ನೀಡಬೇಕು.
> -ಡಾ.ಸುಜಾತಾ, ಸ್ತ್ರೀರೋಗ ತಜ್ಞೆ

'ವೈದ್ಯರು ವೃತ್ತಿ ಬದುಕಿಗೆ ಸಂಬಂಧಿಸಿದ ವೈದ್ಯಕೀಯ ಕಾನೂನುಗಳನ್ನು ತಿಳಿಯಬೇಕು. ವೈದ್ಯ ದೇವೋಭವ ಎಂಬ ಭಾವನೆಗೆ ತಾವು ಅರ್ಹರೆ ಎಂಬ ಬಗ್ಗೆ ಆತ್ಮವಿಮರ್ಶೆ ಮಾಡಿಕೊಳ್ಳಬೇಕು. ದೇಶದಲ್ಲಿ ವೈದ್ಯಕೀಯ ಶಿಕ್ಷಣ ಪಡೆದು ಹಣ ಸಂಪಾದನೆಗಾಗಿ ವಿದೇಶದತ್ತ ಮುಖ ಮಾಡುವುದು ಒಳ್ಳೆಯ ಬೆಳವಣಿಗೆಯಲ್ಲ' ಎಂದು ಅಭಿಪ್ರಾಯಪಟ್ಟರು.

**ಅನನ್ಯ ಸಾಧನೆ:** 'ದೇವರಾಜ ಅರಸು ವೈದ್ಯಕೀಯ ಕಾಲೇಜು ಬಡವರಿಗೆ ಗುಣಮಟ್ಟದ ವೈದ್ಯಕೀಯ ಸೇವೆ ಕಲ್ಪಿಸುತ್ತಿದೆ. ಈ ಕಾಲೇಜಿನಲ್ಲಿ ವ್ಯಾಸಂಗ ಮಾಡಿದ ಅನೇಕ ಮಂದಿ ವೈದ್ಯರು ವೈದ್ಯಕೀಯ ಕ್ಷೇತ್ರದಲ್ಲಿ ಅನನ್ಯ ಸಾಧನೆ ಮಾಡಿದ್ದಾರೆ. ಅವರ ಸೇವೆ ಸಮಾಜಕ್ಕೆ ಸಿಗಬೇಕು' ಎಂದು ಆಶಿಸಿದರು.

'ಬಹುಪಾಲು ವೈದ್ಯರು ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸಲು ಹಿಂದೇಟು ಹಾಕುತ್ತಿದ್ದಾರೆ. ಹೀಗಾಗಿ ಗ್ರಾಮೀಣ ಭಾಗದ ಬಡ ಜನರು ಉತ್ತಮ ವೈದ್ಯಕೀಯ ಸೇವೆಯಿಂದ ವಂಚಿತರಾಗುತ್ತಿದ್ದಾರೆ. ವೈದ್ಯರು ನಗರ ಪ್ರದೇಶದಲ್ಲೇ ಕಾರ್ಯ ನಿರ್ವಹಿಸಬೇಕೆಂಬ ಧೋರಣೆ ಬಿಟ್ಟು ಗ್ರಾಮಗಳತ್ತ ಹೋಗಬೇಕು' ಎಂದು ಮನವಿ ಮಾಡಿದರು.

**ಕೌಶಲ ತರಬೇತಿ:** 'ವೈದ್ಯಕೀಯ ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜತೆಗೆ ವೃತ್ತಿ ಕೌಶಲ ತರಬೇತಿ ಪಡೆದುಕೊಳ್ಳಬೇಕು. ತರಬೇತಿ ಕೊರತೆಯಿಂದಾಗಿ ಸಾಕಷ್ಟು ವೈದ್ಯರು ಗುಣಮಟ್ಟದ ಚಿಕಿತ್ಸೆ ನೀಡಲಾಗದೆ ವೈದ್ಯಕೀಯ ವೃತ್ತಿಯಿಂದ ದೂರ ಸರಿಯುತ್ತಿದ್ದಾರೆ' ಎಂದು ದೇವರಾಜ ಅರಸು ಉನ್ನತ ಶಿಕ್ಷಣ ಹಾಗೂ ಸಂಶೋಧನಾ ಸಂಸ್ಥೆ ಕುಲಪತಿ ಡಾ.ಎಸ್.ಕುಮಾರ್ ವಿಷಾದಿಸಿದರು.

'ಸಮಾಜದಲ್ಲಿ ವೈದ್ಯಕೀಯ ವೃತ್ತಿಯು ಹೆಚ್ಚು ಪ್ರಾಮುಖ್ಯತೆ ಪಡೆದಿದೆ. ಯುವ ವೈದ್ಯರು ವೃತ್ತಿ ಗೌರವಕ್ಕೆ ಚ್ಯುತಿ ಬಾರದಂತೆ ನಡೆದುಕೊಳ್ಳಬೇಕು. ವೈದ್ಯರಿಗೂ ಕಾನೂನುಗಳಿವೆ. ಅವುಗಳನ್ನು ಮೀರಿ ಕೆಲಸ ಮಾಡಬಾರದು. ಉತ್ತಮ ಸಮಾಜ ನಿರ್ಮಾಣಕ್ಕೆ ವೈದ್ಯರು ಆರೋಗ್ಯ ಸೇವೆ ಸಲ್ಲಿಸಬೇಕು' ಎಂದು ಸಂಸ್ಥೆಯ ಉಪ ಕುಲಪತಿ ಡಾ.ಸಿ.ವಿ.ರಘುವೀರ್ ಸಲಹೆ ನೀಡಿದರು.

ಸಂಸ್ಥೆಯ ಹಳೇ ವಿದ್ಯಾರ್ಥಿ ಸಂಘದ ವತಿಯಿಂದ ಸುಜಾತಾ ಅವರನ್ನು ಸನ್ಮಾನಿಸಲಾಯಿತು. ಮಹಾವಿದ್ಯಾಲಯದ ವೈದ್ಯಕೀಯ ಸೂಪರಿಂಟೆಂಡೆಂಟ್ ಡಾ.ಲಕ್ಷ್ಮಯ್ಯ, ಪ್ರಾಂಶುಪಾಲ ಡಾ.ಎಂ.ಎಲ್.ಹರೇಂದ್ರಕುಮಾರ್, ಹಳೇ ವಿದ್ಯಾರ್ಥಿ ಸಂಘದ ಉಪಾಧ್ಯಕ್ಷ ಡಾ.ಎ.ರವೀಶ್, ಜಂಟಿ ಕಾರ್ಯದರ್ಶಿ ಡಾ.ಕೆ.ದಿನೇಶ್, ಖಜಾಂಚಿ ಡಾ.ಸಿ.ಮುನಿನಾರಾಯಣ ಪಾಲ್ಗೊಂಡಿದ್ದರು.

**ಮುಖ್ಯಾಂಶಗಳು**

- ಗುಣಮಟ್ಟದ ಸೇವೆಯಿಂದ ಸಮಾಜದಲ್ಲಿ ಗೌರವ
- ಆತ್ಮವಿಮರ್ಶೆ ಮೂಲಕ ಸೇವೆಗೆ ಆದ್ಯತೆ ನೀಡಿ
- ವೃತ್ತಿ ಗೌರವಕ್ಕೆ ಚ್ಯುತಿಯಾಗದಂತೆ ನಡೆದುಕೊಳ್ಳಿ

ಕನ್ನಡಪ್ರಭ



ವೈದ್ಯರ ದಿನಾಚರಣೆಯಲ್ಲಿ ಸ್ತ್ರೀ ರೋಗ ತಜ್ಞೆ ಡಾ.ಸುಜಾತಾ ಅಭಿಪ್ರಾಯ | ವೈದ್ಯರು ವೃತ್ತಿ ಮೌಲ್ಯ ಕಳೆದುಕೊಳ್ಳಬಾರದು

# ವೈದ್ಯರೇ ರೋಗಿಗೆ ವಿಶ್ವಾಸದಿಂದ ಚಿಕಿತ್ಸೆ ನೀಡಿ

• **ಕನ್ನಡಪ್ರಭ ವಾರ್ತೆ** ಕೋಲಾರ

ವೈದ್ಯರಾದವರು ರೋಗಿಗಳಿಗೆ ವಿಶ್ವಾಸದಿಂದ ಗುಣಮಟ್ಟದ ಚಿಕಿತ್ಸೆ ನೀಡಿದಾಗ ಮಾತ್ರ ಸಮಾಜದಲ್ಲಿ ಅವರಿಗೆ ಗೌರವಸಿಗುತ್ತದೆ ಎಂದು ಸ್ತ್ರೀ ರೋಗ ತಜ್ಞೆ ಡಾ.ಸುಜಾತಾ ಅಭಿಪ್ರಾಯಪಟ್ಟರು.

ನಗರದ ದೇವರಾಜ್ ಅರಸು ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವೈದ್ಯರ ದಿನಾಚರಣೆಯಲ್ಲಿ ಮಾತನಾಡಿದ ಅವರು, ಯುವ ವೈದ್ಯರು ಹಿರಿಯ ವೈದ್ಯರ ಮಾರ್ಗದಲ್ಲಿ ವೃತ್ತಿ ಆರಂಭಿಸಿದರೆ,ಸಾಧನೆಮಾಡಲುಸಹಕಾರಿಯಾಗುತ್ತದೆ ಎಂದರು.

ವೈದ್ಯರು ವೃತ್ತಿ ಮೌಲ್ಯಗಳನ್ನು ಕಳೆದುಕೊಳ್ಳಬಾರದು. ಈಚೆಗೆ ವೈದ್ಯಕೀಯ ಕ್ಷೇತ್ರದಲ್ಲಿ ಹಣಕ್ಕೆ ಹೆಚ್ಚು ಬೆಲೆ ಸಿಗುತ್ತಿರುವುದರಿಂದ ಮೌಲ್ಯಗಳು ಕುಸಿಯುತ್ತಿವೆ. ವೈದ್ಯಕೀಯ ಕಾನೂನಿನ ಬಗ್ಗೆ ಅರಿವು ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು.

ದೇವರಾಜ ಅರಸು ವೈದ್ಯಕೀಯ ಕಾಲೇಜಿನಿಂದ ಬಡವರಿಗೆ ಗುಣಮಟ್ಟದ ಆರೋಗ್ಯ ಕಲ್ಪಿಸಲು ಆರಂಭಿಸಲಾಗಿದೆ. ಇಲ್ಲಿಂದ ಅನೇಕ ಮಂದಿ ವೈದ್ಯರಾಗಿ ಹೊರ ಹೊಮ್ಮಿದ್ದಾರೆ. ಅವರ ಸೇವೆ ಸಮಾಜಕ್ಕೆ ಉಪಯೋಗವಾಗುವಂತಾಗಬೇಕು ಎಂದರು.

ವೈದ್ಯರಿಗೆವೃತ್ತಿ ಜೀವನದಲ್ಲಿಅನೇಕಸವಾಲುಗಳು ಎದುರಾಗುತ್ತವೆ. ಅವುಗಳನ್ನು ಎದುರಿಸುವ ಧೈರ್ಯ ಇರಬೇಕು. ರೋಗಿಗೆ ವಿಶ್ವಾಸದಿಂದ ಚಿಕಿತ್ಸೆ ನೀಡಬೇಕು. ಹಣಗಳಿಕೆಗಾಗಿ ಚಿಕಿತ್ಸೆ ನೀಡಿದರೆ, ಗೌರವ ಕಳೆದುಕೊಳ್ಳಬೇಕಾಗುತ್ತದೆ ಎಂದು ಎಚ್ಚರಿಸಿದರು.

ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸಲು ವೈದ್ಯರು ಹಿಂಜರಿಯುತ್ತಿರುವುದರಿಂದ ಎಷ್ಟೋ ಬಡಜನರು ಆರೋಗ್ಯ ಸೇವೆಯಿಂದ ವಂಚಿತರಾಗುತ್ತಿದ್ದಾರೆ. ವೈದ್ಯರು ಗ್ರಾಮೀಣ ಭಾಗದಲ್ಲಿ ಸೇವೆ ಸಲ್ಲಿಸಲು ಮುಂದಾಗಬೇಕು ಎಂದರು.

ವೈದ್ಯಕೀಯ ವಿದ್ಯಾರ್ಥಿಗಳು ವಿದ್ಯಾಭ್ಯಾಸದ ಜತೆಗೆ ವೃತ್ತಿ ಕೌಶಲ ತರಬೇತಿ ಪಡೆದುಕೊಳ್ಳಲು ಮುಂದಾಗಬೇಕು ಎಂದು ವೈದ್ಯಕೀಯ ವಿಶ್ವವಿದ್ಯಾಲಯದ ಕುಲಪತಿ ಡಾ.ಕುಮಾರ್ ಸಲಹೆ ನೀಡಿದರು.

ಸಮಾಜದಲ್ಲಿ ವೈದ್ಯಕೀಯ ವೃತ್ತಿ ತನ್ನದೆ ಆದ ಪ್ರಮುಖ್ಯತೆ ಪಡೆದುಕೊಂಡಿದೆ. ಇದಕ್ಕೆ ಧಕ್ಕೆ ಎದುರಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಯುವ ವೈದ್ಯರ ಮೇಲಿದೆ' ಎಂದು ಉಪಕುಲಪತಿ ಡಾ.ರಘುವೀರ್ ತಿಳಿಸಿದರು.

ಸಮಾಜದಲ್ಲಿನ ಪ್ರತಿಯೊಬ್ಬ ಮನುಷ್ಯನಿಗೂ ವೈದ್ಯರ ಅವಶ್ಯಕತೆಯಿಲ್ಲದೆ ಬದುಕಲು ಸಾಧ್ಯವಿಲ್ಲ. ಸಣ್ಣ ಕಾಯಿಲೆಯಿಂದ ಹಿಡಿದು ಗಂಭೀರ ಕಾಯಿಲೆಗೆ ಚಿಕಿತ್ಸೆ ಪಡೆದುಕೊಳ್ಳಲು ವೈದ್ಯರ ಬಳಿ ಬರಬೇಕು. ಸಮಾಜದ ಕಟ್ಟಕಡೆಯ ವ್ಯಕ್ತಿಗೂ ಆರೋಗ್ಯ ಸೇವೆ ಕಲ್ಪಿಸಬೇಕು ಎಂಬ ಉದ್ದೇಶದಿಂದ ಆರ್.ಎಲ್.ಜಾಲಪ್ಪ ಅವರು ದೇವರಾಜ ಅರಸು ವೈದ್ಯಕೀಯ ಕಾಲೇಜನ್ನು ಸ್ಥಾಪಿಸಿದ್ದಾರೆ ಎಂದರು.

ವೈದ್ಯಕೀಯ ಕಾಲೇಜಿನಿಂದ ಗ್ರಾಮೀಣ ಪ್ರದೇಶದಲ್ಲಿ ವಿವಿಧ ರೀತಿಯ ಆರೋಗ್ಯ ತಪಾಸಣೆ ನಡೆಸುತ್ತಿದ್ದು, ಹೆಚ್ಚಿನಚಿಕಿತ್ಸೆಯನ್ನುಆಸ್ಪತ್ರೆಯಲ್ಲಿಯೇ ನೀಡಲಾಗುತ್ತಿದೆ. ಇದರ ಉಪಯೋಗಪಡೆದುಕೊಳ್ಳಲು ಸಾಕಷ್ಟು ಮಂದಿ ಮುಂದಾಗುತ್ತಿದ್ದಾರೆ ಎಂದರು.

ಇದೇ ವೇಳೆ ಗರ್ಭಿಣಿ ಮತ್ತು ಸ್ತ್ರೀ ರೋಗ ತಜ್ಞೆ ಡಾ.ಸುಜಾತಾ ಅವರನ್ನು ಸಂಸ್ಥೆಯ ಹಳೇ ವಿದ್ಯಾರ್ಥಿ ಸಂಘದಿಂದ ಸನ್ಮಾನಿಸಲಾಯಿತು.

ವೈದ್ಯಕೀಯ ಅಧೀಕ್ಷಕ ಡಾ.ವಿ.ಲಕ್ಷ್ಮಯ್ಯ, ಪ್ರಾಂಶುಪಾಲ ಡಾ.ಎಂ.ಎಲ್.ಹರೇಂದ್ರಕುಮಾರ್, ಹಳೇ ವಿದ್ಯಾರ್ಥಿ ಸಂಘದ ಉಪಾಧ್ಯಕ್ಷ ಡಾ.ಎ.ರವೀಶ್, ಜಂಟಿ ಕಾರ್ಯದರ್ಶಿ ಡಾ.ಕೆ.ದಿನೇಶ್, ಡಾ.ಸಿ.ಮುನಿನಾರಾಯಣ ಇದ್ದರು.



ದೇವರಾಜ್ ಅರಸು ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಲ್ಲಿ ಹಮ್ಮಿಕೊಂಡಿದ್ದ ವೈದ್ಯರ ದಿನಾಚರಣೆಯಲ್ಲಿ ಡಾ.ಸುಜಾತಾ ಮಾತನಾಡಿದರು.

## ‘ವೈದ್ಯ ವೃತ್ತಿ ಅತ್ಯಂತ ಶ್ರೇಷ್ಠ’

**ಗುಡಿಬಂಡೆ:** ಸಮಾಜದಲ್ಲಿ ಎಲ್ಲ ವೃತ್ತಿಗಳಿಗಿಂತ ವೈದ್ಯ ವೃತ್ತಿ ಅತ್ಯಂತಶ್ರೇಷ್ಠವಾಗಿದ್ದು, ವೈದ್ಯರು ತಮ್ಮ ಸೇವೆಯನ್ನು ನಿಷ್ಠೆ ಹಾಗೂ ಪ್ರಾಮಾಣಿಕತೆಯಿಂದ ನಿರ್ವಹಿಸಬೇಕೆಂದು ಮಹರ್ಷಿ ವಾಲ್ಮೀಕಿ ನಾಯಕರ ಸಂಘದ ಅಧ್ಯಕ್ಷ ಎನ್.ವಿ.ಗಂಗಾಧರ್ ಹೇಳಿದರು.

ಪಟ್ಟಣದ ಸಾರ್ವಜನಿಕ ಆಸ್ಪತ್ರೆಯಲ್ಲಿ ಸೋಮವಾರ ನಡೆದ ವೈದ್ಯರ ದಿನಾಚರಣೆಯಲ್ಲಿ ಮಾತನಾಡಿದ ಅವರು, ವೈದ್ಯ ವೃತ್ತಿಗೆ ಕಾಲಿಡುವ ಮುನ್ನ ಸಮಾಜದ ಸ್ವಾಸ್ಥ್ಯ ಕಾಪಾಡುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು. ವೈದ್ಯ ವೃತ್ತಿ ಅವಲಂಭಿಸುವವರು ಮಾನವೀಯತೆ ಮೈಗೂಡಿಸಿಕೊಳ್ಳಬೇಕು. ರೋಗಿಗಳಿಗೆ ಚಿಕಿತ್ಸೆ ನೀಡುತ್ತಾ ಅವರನ್ನು ತಮ್ಮ ಕುಟುಂಬ ಸದಸ್ಯರಂತೆ ಕಾಣಬೇಕು ಎಂದರು.

ವೈದ್ಯಕೀಯ ವೃತ್ತಿ ಬದುಕು ಸಾರ್ಥಕತೆ ಪಡೆಯಲು ಸಾಧ್ಯ. ಸವಾಲುಗಳಿಸಿದ ಸಮಸ್ಯೆ ನಿರ್ಮೂಲನೆ ಮಾಡಿ ಆರೋಗ್ಯ ಪೂರ್ಣ ಸಮಾಜ ನಿರ್ಮಾಣದಲ್ಲಿ ವೈದ್ಯರ ಪಾತ್ರ ಮಹತ್ತರವಾಗಿದ್ದು, ವೈದ್ಯರು ಯಾವುದೇ ಸನ್ನಿವೇಶದಲ್ಲೂ ಮಾನವೀಯ ಮೌಲ್ಯಗಳಿಂದ ಹಿಂದೆ ಸರಿಯಬಾರದುಎಂದರು.

ವೈದ್ಯ ಡಾ. ಅಂಜಿನಪ್ಪ ಮಾತನಾಡಿ, ವೈದ್ಯಕೀಯ ವೃತ್ತಿ ಶ್ರೇಷ್ಠವಾದುದು. ವೈದ್ಯರ ಬಗ್ಗೆ ವಿಶ್ವಾಸವಿರಲಿ. ಅಪನಂಬಿಕೆಗೆ ಅವಕಾಶ ಮಾಡಿಕೊಡುವುದು ಬೇಡ. ಅವರ ಒತ್ತಡ ಕಡಿಮೆ ಮಾಡುವುದರಿಂದ ಉತ್ತಮ ಶುಶ್ರೂಷೆ ನೀಡಲು ಸಾಧ್ಯ. ಆಗ ಪ್ರತಿ ರೋಗಿಗೂ ಉತ್ತಮ ಚಿಕಿತ್ಸೆ ನೀಡಲು ಸಾಧ್ಯ. ತಾಲೂಕಿನ ಜನತೆ ಇಲ್ಲಿನ ವೈದ್ಯರೊಂದಿಗೆ ಉತ್ತಮವಾಗಿ ನಡೆದುಕೊಳ್ಳುತ್ತಾರೆ ಎಂದರು. ಸಾರ್ವಜನಿಕ ಆಸ್ಪತ್ರೆ ವೈದ್ಯ ಅಕ್ಷಯ್, ಕನ್ನಡಸೇನೆ ತಾಲೂಕು ಅಧ್ಯಕ್ಷ ಅಂಬರೀಶ್, ಆಸ್ಪತ್ರೆ ಸಿಬ್ಬಂದಿ ವೆಂಕಟೇಶ್, ಇರ್ಫಾನ್ ಸೇರಿದಂತೆ ಹಲವರು ಇದ್ದರು.



ವಿಜಯವಾಣಿ



# ವಿದೇಶಕ್ಕೆ ಹೋಗದೆ ಜನ್ಮಭೂಮಿ ಋಣ ತೀರಿಸಿ

## ಯುವ ವೈದ್ಯರಿಗೆ ಸ್ತ್ರೀ ತಜ್ಞೆ ಡಾ.ಸುಜಾತಾ ಸಲಹೆ | ರೋಗಿಗಳಿಗೆ ನೆರವಾಗಿ

■ ವಿಜಯವಾಣಿ ಸುದ್ದಿಜಾಲ ಕೋಲಾರ

ಭಾರತದಲ್ಲಿ ವೈದ್ಯಕೀಯ ಶಿಕ್ಷಣ ಪಡೆದವರು ನಮ್ಮ ದೇಶಕ್ಕೆ ಸೇವೆ ಸಲ್ಲಿಸಬೇಕು. ಗ್ರಾಮೀಣ ಬಡ ರೋಗಿಗಳ ಸೇವೆಗೆ ಆದ್ಯತೆ ನೀಡಬೇಕು ಎಂದು ಸ್ತ್ರೀ ರೋಗ ತಜ್ಞೆ ಡಾ.ಸುಜಾತಾ ತಿಳಿಸಿದರು.

ನಗರದ ದೇವರಾಜ್ ಅರಸು ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಲ್ಲಿ ಸೋಮವಾರ ಹಮ್ಮಿಕೊಂಡಿದ್ದ ವೈದ್ಯರ ದಿನಾಚರಣೆಯಲ್ಲಿ ಉತ್ತಮ ಸೇವೆಗಾಗಿ ಸನ್ಮಾನ ಸ್ವೀಕರಿಸಿ ಮಾತನಾಡಿದರು. ಯುವ ವೈದ್ಯರು ಹಿರಿಯ ವೈದ್ಯರ ಮಾರ್ಗದಲ್ಲಿ ವೃತ್ತಿ ಆರಂಭಿಸಿದರೆ ಪ್ರಶಂಸೆ ಜತೆಗೆ ಕೀರ್ತಿ ಸಂಪಾದಿಸಬಹುದು ಎಂದರು.

ರೋಗಿಗಳಿಗೆ ಗುಣಮಟ್ಟದ ಚಿಕಿತ್ಸೆ ನೀಡಿದಾಗ ವೈದ್ಯರ ಮೇಲೆ ನಂಬಿಕೆ, ವಿಶ್ವಾಸ ಹೆಚ್ಚಾಗುತ್ತದೆ. ಹಣಕ್ಕಾಗಿ ವೃತ್ತಿಯನ್ನು ಅವಲಂಬಿಸುವುದರಿಂದ ನಾನಾ ಸಮಸ್ಯೆ ಎದುರಿಸಬೇಕಾಗುತ್ತದೆ ಎಂದು ಹೇಳಿದರು.

ವಿಜಯವಾಣಿ ಚಿತ್ರ



ಅರಸು ವೈದ್ಯಕೀಯ ಮಹಾ ವಿದ್ಯಾಲಯ ಮತ್ತು ಸಂಶೋಧನಾ ಕೇಂದ್ರದಲ್ಲಿ ನಡೆದ ವೈದ್ಯರ ದಿನಾಚರಣೆ ಯಲ್ಲಿ ಸೋಮವಾರ ಸ್ತ್ರೀ ರೋಗತಜ್ಞೆ ಡಾ.ಸುಜಾತಾ ಅವರನ್ನು ಸನ್ಮಾನಿಸಲಾಯಿತು.

ಹಳ್ಳಿಗೆ ಹೋಗಿ ಕೆಲಸ ಮಾಡುವುದಕ್ಕೆ ವೈದ್ಯರು ಹಿಂಜರಿಬಾರದು. ವೈದ್ಯರಿಗೆ ವೃತ್ತಿ ಜೀವನದಲ್ಲಿ ಅನೇಕ ಸವಾಲು ಎದುರಾಗುತ್ತವೆ. ಅವುಗಳನ್ನು ಎದುರಿಸುವ ಧೈರ್ಯ ಇರಬೇಕು. ಜತೆಗೆ ವೃತ್ತಿ ಕೌಶಲ ತರಬೇತಿ ಪಡೆದುಕೊಳ್ಳಬೇಕು ಎಂದು ಸಲಹೆ ನೀಡಿದರು. ವೈದ್ಯಕೀಯ ವೃತ್ತಿ ತನ್ನದೆ ಪ್ರಾಮುಖ್ಯತೆ ಪಡೆದುಕೊಂಡಿದೆ. ಧಕ್ಕೆ ಎದುರಾಗದಂತೆ ನೋಡಿಕೊಳ್ಳುವ ಜವಾಬ್ದಾರಿ ಯುವ ವೈದ್ಯರ ಮೇಲಿದೆ. ವೈದ್ಯರಿಗೂ ಕಾನೂನುಗಳಿವೆ. ಅದನ್ನು ಮೀರಿ ಕೆಲಸ ಮಾಡಬಾರದು. ಉತ್ತಮ ಸಮಾಜ ನಿರ್ಮಾಣ ಮಾಡುವ ನಿಟ್ಟಿನಲ್ಲಿ ವೈದ್ಯರು ಗಮನ ಹರಿಸಬೇಕು ಎಂದು ಉಪಕುಲಪತಿ ಡಾ.ರಘುವೀರ್ ಕಿವಿಮಾತು ಹೇಳಿದರು.

ವೈದ್ಯಕೀಯ ಅದೀಕ್ಷಕ ಡಾ.ವಿ.ಲಕ್ಷ್ಮಯ್ಯ, ಪ್ರಾಂಶುಪಾಲ ಡಾ.ಎಂ.ಎಲ್.ಹರೇಂದ್ರ ಕುಮಾರ್, ಹಳೇ ವಿದ್ಯಾರ್ಥಿ ಸಂಘದ ಉಪಾಧ್ಯಕ್ಷ ಡಾ.ಎ..ರವೀಷ್, ಜಂಟಿ ಕಾರ್ಯದರ್ಶಿ ಡಾ.ಕೆ.ದಿನೇಶ್, ಖಜಾಂಚಿ ಡಾ.ಸಿ.ಮುನಿನಾರಾಯಣ ಇದ್ದರು.

ಸಂಯುಕ್ತ ಕರ್ನಾಟಕ



# ಭಾರತದ ಬಂಡವಾಳ–ಅಮೇರಿಕಾಗೆ ಸೇವೆ ಸರಿಯೇ?

## ವೈದ್ಯರಿಗೆ ಡಾ.ಸುಜಾತ ಪ್ರಶ್ನೆ



**ಸಂ.ಕ ಸಮಾಚಾರ ಕೋಲಾರ**

ಗ್ರಾಮೀಣ ಪ್ರದೇಶದಲ್ಲಿ ಸೇವೆ ಸಲ್ಲಿಸಲು ವೈದ್ಯರು ನಿರಾಕರಿಸುವುದು ಸರಿಯಲ್ಲ. ಇದರಿಂದ ಬಹುತೇಕ ಮಂದಿ ಆರೋಗ್ಯ ಸೇವೆಯಿಂದ ವಂಚಿತರಾಗುತ್ತಿದ್ದು ಯುವವೈದ್ಯರು ಈ ಲೋಪವನ್ನು ತಿದ್ದಿಕೊಂಡು ಹಳ್ಳಿ ಜನರ ಆರೋಗ್ಯ ಸೇವೆಗೆ ಮುಂದಾಗಬೇಕು ಎಂದು ಸ್ತ್ರೀರೋಗ ತಜ್ಞೆ ಡಾ.ಸುಜಾತ ಕಿವಿಮಾತು ಹೇಳಿದರು.

ವೈದ್ಯರ ದಿನಾಚರಣೆ ಅಂಗವಾಗಿ ಸೋಮವಾರ ನಗರದ ದೇವರಾಜ್ ಅರಸು ವೈದ್ಯಕೀಯ ಕಾಲೇಜಿನಲ್ಲಿ ಹಳೆಯ ವಿದ್ಯಾರ್ಥಿಗಳ ಸಂಘದಿಂದ ತಮಗೆ ನೀಡಿದ ಸನ್ಮಾನ ಸ್ವೀಕರಿಸಿ ಮಾತನಾಡಿದರು.

ಕೆಲ ವೈದ್ಯರು ವೃತ್ತಿಧರ್ಮವನ್ನು ಕಡೆಗಣಿಸುತ್ತಿರುವುದರಿಂದ ವೈದ್ಯಕೀಯ ಕ್ಷೇತ್ರದ ಮೌಲ್ಯಗಳು ಕುಸಿಯುತ್ತಿವೆ. ವೈದ್ಯರಾದವರು ವೈದ್ಯಕೀಯ ಕಾನೂನಿನ ಬಗ್ಗೆಯೂ ಅರಿವು ಪಡೆದುಕೊಳ್ಳಬೇಕು. ಅದರಿಂದ ವೃತ್ತಿ ಜೀವನದಲ್ಲಿ ಅನೇಕ ಸವಾಲು ಎದುರಾದರೂ ಧೈರ್ಯದಿಂದ ಎದುರಿಸಲು ಸಾಧ್ಯ ಎಂದರು.

ರೋಗಿಗೆ ನಗುಮುಖದಿಂದ ಚಿಕಿತ್ಸೆ ನೀಡುವುದನ್ನು ರೂಢಿಸಿಕೊಳ್ಳಬೇಕು. ಹಣ ಗಳಿಕೆಯೇ ಪ್ರಧಾನ ಆಗಬಾರದೆಂದು ಸೂಚಿಸಿದ ಸುಜಾತ ಪ್ರತಿಭಾ ಪಲಾಯನ ಎಷ್ಟು ಸರಿ? ಎಂದು ಖಾರವಾಗಿ ಪ್ರಶ್ನಿಸಿದರು.

ಸರ್ಕಾರ ವೈದ್ಯಕೀಯ ಶಿಕ್ಷಣಕ್ಕೆ ಕೋಟಿಗಟ್ಟಲೆ ಬಂಡವಾಳ ವಿನಿಯೋಗ ಮಾಡಿರುತ್ತದೆ ಎಂಬುದನ್ನು ಅವಲೋಕನ ಮಾಡಿಕೊಳ್ಳಬೇಕು. ಭಾರತದಲ್ಲಿ ಶಿಕ್ಷಣ ಅಮೇರಿಕಾದಲ್ಲಿ ಸೇವೆ ಎಂದಾದರೆ ನಮ್ಮ ದೇಶದ ಗತಿ ಏನು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ವೈದ್ಯಕೀಯ ವಿದ್ಯಾರ್ಥಿಗಳು ಓದಿನ ಜತೆಗೆ ವೃತ್ತಿ ಕೌಶಲ ತರಬೇತಿ ಪಡೆದುಕೊಳ್ಳಲು ಮುಂದಾಗಬೇಕು. ಇದರಿಂದ ಆತ್ಮವಿಶ್ವಾಸ ಹೆಚ್ಚಾಗಿ ಗುಣಮಟ್ಟದ ಚಿಕಿತ್ಸೆ ನೀಡಲು ಸಾಧ್ಯವಾಗುತ್ತದೆ ಎಂದು ಅರಸು ವೈದ್ಯ ವಿ.ವಿ ಶ್ವವಿದ್ಯಾಲಯದ ಕುಲಪತಿ ಡಾ.ಕುಮಾರ್ ಹೇಳಿದರು.

ಸರ್ಕಾರ ವಿದೇಶಕ್ಕೆ ಪ್ರತಿಭಾ ಪಲಾಯನವನ್ನು ತಪ್ಪಿಸಲು ಮುಂದಾಗುವ ದಿಸೆಯಲ್ಲಿ ಸಮಗ್ರ ಕಾನೂನನ್ನು ರೂಪಿಸುವ ಅಗತ್ಯವಿದೆ ಎಂದು ಅಭಿಪ್ರಾಯಪಟ್ಟರು.

ಉಪಕುಲಪತಿ ಡಾ.ರಘುವೀರ್ ಮಾತನಾಡಿ ವೃತ್ತಿಯ ಪ್ರಾಮುಖ್ಯತೆಗೆ ಧಕ್ಕೆ ಬಾರದಂತೆ ಯುವ ವೈದ್ಯರು ಮುಂದಾಗಬೇಕು. ಯಾವುದೇ ಕಾರಣಕ್ಕೂ ಕಾನೂನು ಮೀರಿ ಕೆಲಸ ಮಾಡಬಾರದು. ಸವಾಲುಗಳನ್ನು ಧೈರ್ಯದಿಂದ ಎದುರಿಸಿ ಪ್ರಾಮಾಣಿಕತೆ ಮೆರೆಯಬೇಕು ಎಂದು ಸಲಹೆ ನೀಡಿದರು.

ಜಾಲಪ್ಪ ಆಸ್ಪತ್ರೆ ವೈದ್ಯಕೀಯ ಅಧೀಕ್ಷಕ ಡಾ.ಪಿ.ಲಕ್ಷ್ಮಯ್ಯ, ಪ್ರಾಂಶುಪಾಲ ಡಾ.ಎಂ.ಎಲ್. ಹರೇಂದ್ರಕುಮಾರ್, ಹಳೆಯ ವಿದ್ಯಾರ್ಥಿ ಸಂಘದ ಉಪಾಧ್ಯಕ್ಷ ಡಾ.ಎ.ರವೀಶ್, ಜಂಟಿ ಕಾರ್ಯದರ್ಶಿ ಡಾ.ಕೆ.ದಿನೇಶ್ ಕಾರ್ತೀಕ್, ಖಜಾಂಚಿ ಡಾ.ಸಿ. ಮುನಿನಾರಾಯಣಪ್ಪ ವೇದಿಕೆಯಲ್ಲಿದ್ದರು.